**ಕರ್ನಾಟಕ ಸರ್ಕಾರದ ನಡವಳಿ**

ವಿಷಯ: ಶ್ರೀ ಎ.ಜಿ ದೇಸಾಯಿ, ಪ್ರಭಾರ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಮನಗುತ್ತಿ ಗ್ರಾಮ ಪಂಚಾಯಿತಿ, ಹುಕ್ಕೇರಿ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರ ವಿರುದ್ಧ ಲೋಕಾಯುಕ್ತ ವಿಚಾರಣೆ- ಅಂತಿಮ ಆದೇಶ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 502 ಗ್ರಾಪಂಕಾ 2017, ದಿನಾಂಕ: 13.06.2017.
2. ಅಪರ ನಿಬಂಧಕರು ವಿಚಾರಣೆಗಳು-7, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರು ಮಾನ್ಯ ಉಪಲೋಕಾಯುಕ್ತ ರವರಿಗೆ ಸಲ್ಲಿಸಿದ ವಿಚಾರಣಾ ವರದಿ ಸಂಖ್ಯೆ: UPLOK-1 / DE / 812 / 2017/ARE-7, ದಿನಾಂಕ: 21.01.2022.
3. ಮಾನ್ಯ ಉಪಲೋಕಾಯುಕ್ತ, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಶಿಫಾರಸ್ಸು ಸಂಖ್ಯೆ: UPLOK-1 / DE / 812 / 2017/ARE-7, ದಿನಾಂಕ: 27.01.2022.

**ಪ್ರಸ್ತಾವನೆ :**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಆದೇಶದಲ್ಲಿ ಶ್ರೀ ಎ.ಜಿ ದೇಸಾಯಿ, ಪ್ರಭಾರ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಮನಗುತ್ತಿ ಗ್ರಾಮ ಪಂಚಾಯಿತಿ, ಹುಕ್ಕೇರಿ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರ ವಿರುದ್ಧದ ಈ ಕೆಳಕಂಡ ಆರೋಪಗಳ ಬಗ್ಗೆ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14-A ರಡಿ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿ ಅಪರ ನಿಬಂಧಕರು ವಿಚಾರಣೆಗಳು-7, ಕರ್ನಾಟಕ ಲೋಕಾಯುಕ್ತ ಇವರು ಸದರಿಯವರ ವಿರುದ್ಧದ ಈ ಕೆಳಕಂಡ ಆರೋಪದ ಮೇಲೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಿ, ಈ ಕೆಳಗಿನಂತೆ ದೋಷಾರೋಪಣೆಯನ್ನು ಸಲ್ಲಿಸಿರುತ್ತಾರೆ,

**"ದೋಷಾರೋಪಣೆ":**

" ಆಪಾದಿತ ಸರ್ಕಾರಿ ನೌಕರರಾದ ಶ್ರೀ ಎ.ಜಿ ದೇಸಾಯಿ ಆದ ನೀವು ಪ್ರಭಾರಿ ಪ್ರಂಚಾಯಿತಿ ಅಭಿವೃದ್ಧಿ ಅಧಿಕಾರಿ, ಮನಗುತ್ತಿ ಗ್ರಾಮ ಪಂಚಾಯಿತಿ, ಹುಕ್ಕೇರಿ ತಾಲ್ಲೂಕು, ಬೆಳಗಾವಿ ಜಿಲ್ಲೆ ಇಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾಗ ಇಂದಿರಾ ಆವಾಸ ವಸತಿ ಯೋಜನೆಯಡಿಯಲ್ಲಿ ಫಲಾನುಭವಿಗಳನ್ನು ಆಯ್ಕೆ ಮಾಡಲು ಅವರು ಅರ್ಹ ಫಲಾನುಭವಿಗಳೆಂದು ತೋರಿಸಲು ಸಂಬಂಧಪಟ್ಟ ಜಾತಿ ಪ್ರಮಾಣ ಪತ್ರವನ್ನಾಗಲೀ, ಆದಾಯ ಪ್ರಮಾಣ ಪತ್ರವನ್ನಾಗಲೀ ಹಾಗೂ ವಸತಿ ಇಲ್ಲದೇ ಇದ್ದ ಪ್ರಮಾಣ ಪತ್ರವನ್ನಾಗಲೀ ಹಾಜರುಪಡಿಸದೇ ಯೋಜನೆಯನ್ನು ಸರಿಯಾಗಿ ಅನುಷ್ಠಾನಗೊಳಿಸದೇ ಕರ್ತವ್ಯಲೋಪ ಎಸಗಿರುತ್ತೀರಿ.

ನಿಮ್ಮ ಕರ್ತವ್ಯ ಪಾಲನೆಯಲ್ಲಿ ಸಂಪೂರ್ಣ ಪ್ರಾಮಾಣಿಕತೆ ಹಾಗೂ ಕರ್ತವ್ಯ ನಿಷ್ಠೆಯನ್ನು ಪಾಲಿಸದೇ ಮತ್ತು ಸರ್ಕಾರಿ ನೌಕರರಿಗೆ ಉಚಿತವಲ್ಲದ ರೀತಿಯಲ್ಲಿ ನಡೆದುಕೊಂಡು ದುರ್ನಡತೆ / ದುರ್ವತನೆಯಿಂದ ವರ್ತಿಸಿ, ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು, 1966ರ ನಿಯಮ 3 (1)(i) ರಿಂದ (iii) ರಡಿಯಲ್ಲಿ ಉಕ್ತವಾದ ದುರ್ನಡತೆ ಎಸಗಿದ್ದೀರಿ ಎಂದು ನಿಮ್ಮ ಮೇಲೆ ದೋಷಾರೋಪಣೆಯನ್ನು ಮಾಡಲಾಗಿದೆ. "

ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿ ವಿಚಾರಣಾಧಿಕಾರಿಗಳು ಶ್ರೀ ಎ.ಜಿ ದೇಸಾಯಿ, ಪ್ರಭಾರ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಮನಗುತ್ತಿ ಗ್ರಾಮ ಪಂಚಾಯಿತಿ, ಹುಕ್ಕೇರಿ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರ ವಿರುದ್ಧದ ಆರೋಪವು ಸಾಬೀತಾಗಿರುವುದಿಲ್ಲವೆಂದು ನಿರ್ಣಯಿಸಿರುತ್ತಾರೆ.

ಇದರನ್ವಯ ಮೇಲೆ ಓದಲಾದ ಕ್ರಮ ಸಂಖ್ಯೆ (3) ರಲ್ಲಿ ಮಾನ್ಯ ಉಪಲೋಕಾಯುಕ್ತರು ವಿಚಾರಣಾಧಿಕಾರಿಗಳ ವರದಿಯನ್ನು ಅಂಗೀಕರಿಸಿ, ಶ್ರೀ ಎ.ಜಿ ದೇಸಾಯಿ, ಪ್ರಭಾರ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಮನಗುತ್ತಿ ಗ್ರಾಮ ಪಂಚಾಯಿತಿ, ಹುಕ್ಕೇರಿ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರ ವಿರುದ್ಧದ ಆರೋಪ ಸಾಬೀತಾಗದಿರುವ ಹಿನ್ನೆಲೆಯಲ್ಲಿ ಸದರಿಯವರನ್ನು ಆರೋಪದಿಂದ ಮುಕ್ತಗೊಳಿಸಲು ಶಿಫಾರಸ್ಸು ಮಾಡಿರುತ್ತಾರೆ.

ಮೇಲ್ಕಂಡ ಅಂಶಗಳನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಅಪರ ನಿಬಂಧಕರು-7, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿದ ವಿಚಾರಣಾ ವರದಿ, ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸು ಹಾಗೂ ದಾಖಲೆಗಳು ಮತ್ತು ಸಾಕ್ಷಾಧ್ಯಾರಗಳನ್ನು ಕೂಲಂಕಷವಾಗಿ ಪರಿಶೀಲಿಸಿ ಶ್ರೀ ಎ.ಜಿ ದೇಸಾಯಿ, ಪ್ರಭಾರ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಮನಗುತ್ತಿ ಗ್ರಾಮ ಪಂಚಾಯಿತಿ, ಹುಕ್ಕೇರಿ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರ ವಿರುದ್ಧ ಆರೋಪ ಸಾಬೀತಾಗದಿರುವ ಹಿನ್ನೆಲೆಯಲ್ಲಿ ಸದರಿಯವರನ್ನು ಆರೋಪಮುಕ್ತರನ್ನಾಗಿಸಲು ನಿರ್ಣಯಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 28 ಗ್ರಾಪಂಕಾ 2022, ಬೆಂಗಳೂರು, ದಿನಾಂಕ: 12.04.2022.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಎ.ಜಿ ದೇಸಾಯಿ, ಪ್ರಭಾರ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಮನಗುತ್ತಿ ಗ್ರಾಮ ಪಂಚಾಯಿತಿ, ಹುಕ್ಕೇರಿ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರ ವಿರುದ್ಧದ ಆರೋಪದಿಂದ ದೋಷಮುಕ್ತರನ್ನಾಗಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,
12/4/22
(ರಾಜು ಎಂ.ಎಂ)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

<u>ಗೆ,</u>

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರವರು ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ಅಪರ ನಿಬಂಧಕರು, ವಿಚಾರಣೆಗಳು-7, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬೆಳಗಾವಿ ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಹುಕ್ಕೇರಿ, ಬೆಳಗಾವಿ ಜಿಲ್ಲೆ
   ಶ್ರೀ ಎ.ಜಿ ದೇಸಾಯಿ, ಪ್ರಭಾರ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಮನಗುತ್ತಿ ಗ್ರಾಮ ಪಂಚಾಯಿತಿ, ಹುಕ್ಕೇರಿ ತಾಲ್ಲೂಕು, ಬೆಳಗಾವಿ ಜಿಲ್ಲೆ **(ಇವರಿಗೆ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್ ಹುಕ್ಕೇರಿ, ಬೆಳಗಾವಿ ಜಿಲ್ಲೆ ಇವರ ಮುಖಾಂತರ)**
6. ಗಣಕ ಕೋಶ.
7. ಶಾಖಾ ರಕ್ಷಾಕಡತ/ಹೆಚ್ಚುವರಿ ಪ್ರತಿ.